ಇ) ಪ್ರಸ್ತುತ ಸಾಲಿನಲ್ಲಿ ಹೊಸದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲಾಗುತ್ತಿಲ್ಲ.

ಈ) ಇಲ್ಲ.

ಉದ್ಭವಿಸುವುದಿಲ್ಲ.

ಪ್ರವಾಸಿ ಕೇಂದ್ರ ಮಂಜೂರಾತಿ

246(253); ಶ್ರೀ ಕೋಳಿವಾಡ ಕೆ.ಬಿ. (ರಾಣೆಬೆನ್ನೂರು)

ಅ) ರಾಣೆಬೆನ್ನೂರು ಕೃಷ್ಣಮೃಗ ಅಭಯಾರಣ್ಯದಲ್ಲಿ ಒಂದು ಪ್ರವಾಸಿ ಕೇಂದ್ರವನ್ನು ಸ್ಥಾಪಿಸಲು ರೂ. 8 ಕೋಟಿ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಈ ಬಗ್ಗೆ ಒಂದು ಮನವಿಯು ಇಲಾಖೆಯಲ್ಲಿ ಸ್ವೀಕೃತವಾಗಿರುತ್ತದೆ.

ಆ) ಈ ಬಗ್ಗೆ ಪರಿಶೀಲಿಸಲಾಗುತ್ತದೆ.

ಕನ್ನಡ ಸಾಹಿತ್ಯ ಸಮ್ಮೇಳನ ಅನುದಾನ

249(48); ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ)

ಅ) ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನಲ್ಲಿ 2014ರ ಆಗಸ್ಟ್ ತಿಂಗಳಲ್ಲಿ ನಡೆದ ತೃತೀಯ ಕನ್ನಡ ಸಾಹಿತ್ಯ ಸಮ್ಮೇಳನದ ರೂ. 1.00 ಲಕ್ಷಗಳ ಅನುದಾನವನ್ನು ಈವರೆಗೆ ಬಿಡುಗಡೆ ಮಾಡದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;